# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2405-00-103-0-17 ರಿಂದ ರೂ.8.00 ಲಕ್ಷಗಳನ್ನು ಪುನರ್ ವಿನಿಯೋಗ ಮಾಡಿರುವ ಮೊತ್ತವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1) ಮೀನುಗಾರಿಕೆ ನಿರ್ದೇಶನಾಲಯ ಆದೇಶ ಸಂಖ್ಯೆ: ಮೀನಿ/08/ಪಂವಾಯೋ/2021, ದಿನಾಂಕ: 16-02-2021

2) ಮೀನುಗಾರಿಕೆ ನಿರ್ದೇಶಕರ ಪತ್ರ ಸಂಖ್ಯೆ: ಮೀನಿ/08/ಪಂವಾಯೋ/ 2021 ದಿನಾಂಕ: 10-03-2021.

******

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಮೋಟರೀಕೃತ ದೋಣಿಗಳಿಗೆ ಸೀಮೆಎಣ್ಣೆ ವಿತರಣೆ (2405-00-103-0-17-422)ಯಿಂದ ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ ಮಾರಾಟ ತೆರಿಗೆ ಮರುಪಾವತಿ (2405-00-103-0-23-422) ಯೋಜನೆಗೆ ರೂ.8.00 ಲಕ್ಷಗಳನ್ನು ಆದೇಶ ಸಂಖ್ಯೆ: ಎಫ್ ಡಿ/03/ಟಿಎಫ್ ಪಿ/2018, ದಿನಾಂಕ: 14-05-2018 ರ ಕ್ರಮ ಸಂಖ್ಯೆ 29 ರಡಿ ಪ್ರದತ್ತವಾಗಿರುವ ಅಧಿಕಾರದನ್ವಯ ಮೀನುಗಾರಿಕೆ ನಿರ್ದೇಶಕರು ಪುನರ್ ವಿನಿಯೋಗ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ, ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರು ಸದರಿ ಮೊತ್ತವನ್ನು ಆರ್ಥಿಕ ಇಲಾಖೆಯು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಖಾತೆಗೆ ಜಮಾ ಮಾಡಲಾಗಿರುವುದರಿಂದ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ.8.00 ಲಕ್ಷಗಳನ್ನು ಮೀನುಗಾರಿಕೆ ಇಲಾಖೆಗೆ ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-96 ಮೀಇಯೋ 2021, ಬೆಂಗಳೂರು**
**ದಿನಾಂಕ: 12-03-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೀನುಗಾರಿಕೆ ಮೋಟರೀಕೃತ ದೋಣಿಗಳಿಗೆ ಸೀಮೆಎಣ್ಣೆ ವಿತರಣೆ (2405-00-103-0-17-422)ಯಿಂದ ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ ಮಾರಾಟ ತೆರಿಗೆ ಮರುಪಾವತಿ (2405-00-103-0-23-422) ಯೋಜನೆಗೆ ಮೀನುಗಾರಿಕೆ ನಿರ್ದೇಶಕರು ಪುನರ್ ವಿನಿಯೋಗ ಮಾಡಲಾದ ರೂ.8.00 ಲಕ್ಷ (ಎಂಟು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಮೀನುಗಾರಿಕೆ ನಿರ್ದೇಶಕರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

Kamakshi U.A

A4P



ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು **ಕಡ್ಡಾಯವಾಗಿ** ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-102/ಮೀಇಯೋ/2020, ದಿನಾಂಕ: 16-06-2020 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2020-21ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ/4/ಟಿಎಫ್ ಪಿ/2020, ದಿನಾಂಕ: 27-10-2020, 04-11-2020 ಮತ್ತು 24-11-2020 ರಲ್ಲಿ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A 12/3/21
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ~~ಸಂಬಂಧಪಟ್ಟವರುಗಳಿಗೆ~~ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.